ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

4

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 10/1/21

## ದೇಶದ ಮೊದಲ ಆಟಿಕೆ ಕ್ಲಸ್ಟರ್ ನಿರ್ಮಾಣಕ್ಕೆ ಸಿಎಂ ಅಡಿಗಲ್ಲು

# ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಸರಕಾರ ಬದ್ಧ

**ಸಂ.ಕ.ಸಮಾಚಾರ, ಕೊಪ್ಪಳ** 10/1/21

ಕಲ್ಯಾಣ ಕರ್ನಾಟಕ ಭಾಗದಲ್ಲಿ ಸ್ಥಾಪನೆಯಾಗುವ ಆಟಿಕೆ ಕ್ಲಸ್ಟರ್ ಘಟಕದಿಂದ ಸಹಸ್ರಾರು ಜನರಿಗೆ ಉದ್ಯೋಗ ಸಿಗಲಿದ್ದು ಹಿಂದುಳಿದ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ನಮ್ಮ ಸರಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹೇಳಿದರು.



ಭಾನಾಪುರ ಬಳಿ ನಿರ್ಮಾಣವಾಗುತ್ತಿರುವ ದೇಶದ ಮೊದಲ ಆಟಿಕೆ ಕ್ಲಸ್ಟರ್‌ಗೆ ಶನಿವಾರ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಈ ಆಟಿಕೆ ಘಟಕ ನಿರ್ಮಾಣ ಕಾರ್ಯವನ್ನು ಬೇಗನೆ ಮುಗಿಸಿ ಒಂದು ವರ್ಷದಲ್ಲೆ ಘಟಕ ಉದ್ಘಾಟನೆಗಾಗಿ ಪ್ರಧಾನಿ ಮೋದಿಯವರನ್ನು ಕರೆಸುತ್ತೇವೆ ಎಂದರು. ಈ ಕ್ಲಸ್ಟರ್ ನಿರ್ಮಾಣದಿಂದ ಕೇವಲ ಪುರುಷರಲ್ಲದೆ ಮಹಿಳೆಯರಿಗೂ ಉದ್ಯೋಗ ಸಿಗಲಿವೆ ಎಂದರು.

ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್ ಮಾತನಾಡಿ, ಆಟಿಕೆ ಸಾಮಗ್ರಿಗಳು ಇಡೀ ಜಗತ್ತಿನಲ್ಲಿ ಅತಿಹೆಚ್ಚು ವ್ಯಾಪಾರ ಆಗುವಂತ ವಸ್ತುಗಳು. ಇದರಿಂದ ಆರ್ಥಿಕತೆ ಹೆಚ್ಚುತ್ತದೆ. ಚೀನಾ ಸೇರಿದಂತೆ ಬಹುತೇಕ ವಿದೇಶಗಳಿಗೆ ಇಲ್ಲಿ ತಯಾರಾಗುವ ಆಟಿಕೆ ವಸ್ತುಗಳನ್ನು ರಫ್ತು ಮಾಡಬಹುದು. ಈ ಕ್ಲಸ್ಟರ್‌ನಲ್ಲಿ ಹತ್ತಾರು ಕಂಪನಿಗಳು ಸ್ಥಾಪನೆಯಾಗಲಿವೆ.

ಇದರಿಂದ 25 ಸಾವಿರ ನೇರ ಉದ್ಯೋಗ, ಸೇರಿ ಲಕ್ಷಕ್ಕೂ ಹೆಚ್ಚು ಪರೋಕ್ಷ ಉದ್ಯೋಗ ದೊರಕಲಿವೆ ಎಂದರು.

ಸಚಿವರಾದ ಆನಂದ್ ಸಿಂಗ್, ಸಿ.ಸಿ. ಪಾಟೀಲ್, ಬಿ.ಸಿ. ಪಾಟೀಲ್, ಸಂಸದ ಸಂಗಣ್ಣ ಕರಡಿ, ಮಾಜಿ ಸಚಿವರಾದ ಆರ್.ವಿ. ದೇಶಪಾಂಡೆ, ಬಸವರಾಜ ರಾಯರಡ್ಡಿ, ಶಾಸಕರಾದ ಹಾಲಪ್ಪ ಆಚಾರ್, ಪರಣ್ಣ ಮುನವಳ್ಳಿ, ಅಮರೇಗೌಡ ಬಯ್ಯಾಪುರ, ರಾಮಣ್ಣ ಲಮಾಣಿ, ಶಂಕರ ಪಾಟೀಲ್ ಮುನೇನಕೊಪ್ಪ, ರಾಘವೇಂದ್ರ ಹಿಟ್ನಾಳ, ಬಸವರಾಜ ದಡೆಸೂಗೂರ, ವಿಪ ಸದಸ್ಯರು, ಜಿಪಂ ಅಧ್ಯಕ್ಷ ರಾಜಶೇಖರ ಹಿಟ್ನಾಳ ಸೇರಿದಂತೆ ಹಲವು ಗಣ್ಯರು, ಕ್ಲಸ್ಟರ್‌ನ ಅಧಿಕಾರಿಗಳು ಉಪಸ್ಥಿತರಿದ್ದರು.

“ಹೊಸ ಕೈಗಾರಿಕೆಗಳಿಗೆ ಕೃಷಿ ಭೂಮಿ ಖರೀದಿಸಲು ಸರ್ಕಾರ ಮುಂದಾಗಿದೆ. ರಾಜ್ಯದಲ್ಲಿ ಉದ್ಯಮ ಸ್ನೇಹಿ ವಾತಾರವಣ ಸೃಷ್ಟಿ ಆಗಿದೆ. ರಾಜ್ಯದಲ್ಲಿ ಟೌನ್‌ಶಿಪ್ ನಿರ್ಮಿಸಲಾಗುವುದು. ಬೆಂಗಳೂರು ಕೇಂದ್ರಿತ ಕೈಗಾರಿಕೆ ಬಿಟ್ಟು ಇದೀಗ ಇಡೀ ರಾಜ್ಯದ ಬೇರೆ ಬೇರೆ ಜಿಲ್ಲೆಗಳಲ್ಲೂ ಕೈಗಾರಿಕೆಗಳು ನಿರ್ಮಾಣವಾಗುವಂತೆ ಮಾಡಲಾಗುತ್ತಿದೆ.

■ **ಬಿ.ಎಸ್.ಯಡಿಯೂರಪ್ಪ** । ಸಿಎಂ

“ಹೊಸ ಕೈಗಾರಿಕಾ ನೀತಿಯಲ್ಲಿ ಇರುವಂತೆ ಸ್ಥಳೀಯರಿಗೆ ಉದ್ಯೋಗ ನೀಡಲೇಬೇಕು. ಈಗಾಗಲೆ ರಾಜ್ಯದ ಎಲ್ಲಾ ಕಂಪನಿಗಳಿಗೆ ಭೇಟಿ ನೀಡಿ ಸ್ಥಳೀಯರಿಗೆ ಉದ್ಯೋಗ ನೀಡಲಾಗಿದೆಯೋ ಎಂದು ಪರೀಕ್ಷಿಸಲಾಗಿದೆ. ಎಲ್ಲಾ ಕಡೆಗಳಲ್ಲೂ ಸ್ಥಳೀಯರಿಗೆ ಉದ್ಯೋಗ ನೀಡಲಾಗಿದೆ.

■ **ಜಗದೀಶ ಶೆಟ್ಟರ** । ಕೈಗಾರಿಕೆ ಸಚಿವ